All India Radio: Bangalore
National Bulletin In Kannada
04.03.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
***************

ಮುಖ್ಯಾಂಶಗಳು

೧. ಕೇಂದ್ರ ಬಜೆಟ್ ನಂತರ ಆಯೋಜಿಸಿರುವ ಮೂರು ವೆಬಿನಾರ್‌ಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಇಂದು ವಿಡಿಯೊ ಕಾನ್ಫರೆನ್ಸ್ ಮೂಲಕ ಭಾಗಿ

೨. ಭಾರತ ಪ್ರವಾಸದಲ್ಲಿರುವ ಬೆಲ್ಜಿಯಂ ರಾಜಕುಮಾರಿ ಆಸ್ಟ್ರಿಡ್ ಇಂದು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮಾತುಕತೆ

೩. ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಇಂದಿನಿಂದ ಯುನೈಟೆಡ್ ಕಿಂಗ್‌ಡಮ್ ಮತ್ತು ಐರ್ಲೆಂಡ್‌ಗೆ ಪ್ರವಾಸ

೪. ಐಸಿಸಿ ಚಾಂಪಿಯನ್ಸ್ ಟ್ರೋಫಿ ಪುರುಷರ ಕ್ರಿಕೆಟ್; ಮೊದಲ ಸೆಮಿಫೈನಲ್‌ನಲ್ಲಿ ಭಾರತ-ಆಸ್ಟ್ರೇಲಿಯಾ ಮುಖಾಮುಖಿ

***************

ಕೇಂದ್ರ ಬಜೆಟ್ ನಂತರ ಆಯೋಜಿಸಿರುವ ಮೂರು ವೆಬ್‌ನಾರ್‌ಗಳಲ್ಲಿ ಪ್ರಧಾನಿ ನರೇಂದ್ರಮೋದಿ ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಲಿದ್ದಾರೆ. ದೇಶದ ಚಾಲನಾ ಶಕ್ತಿ ಎಂದೇ ಗುರುತಿಸಿರುವ ಎಂ ಎಸ್ ಎಂ ಇ ತಯಾರಿಕೆ , ರಫ್ತು ಮತ್ತು ಪರಮಾಣು ಇಂದನ ಮಿಷನ್‌ಗಳು ಬಂಡವಾಳ ಹೂಡಿಕೆ ಮತ್ತು ವಾಣಿಜ್ಯ ವಹಿವಾಟು ಸುಧಾರಣೆಗಳ ಕುರಿತು ವೆಬ್‌ನಾರ್‌ಗಳು ನಡೆಯಲಿವೆ. ಬಳಿಕ ಪ್ರಧಾನಿಯವರು ಸಭಿಕರನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ.

ಭಾರತದ ಕೈಗಾರಿಕೋದ್ಯಮ ವ್ಯಾಪಾರ ಮತ್ತು ಇಂಧನ ಕಾರ್ಯತಂತ್ರಗಳ ಕುರಿತ ಚರ್ಚೆಯಲ್ಲಿ ಸರ್ಕಾರಿ ಅಧಿಕಾರಿಗಳು ಉದ್ಯಮದ ಪ್ರಮುಖರು ಮತ್ತು ವ್ಯಾಪಾರ ವಹಿವಾಟು ತಜ್ಞರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಲು ವೆಬ್‌ನಾರ್ ಗಳು ಒಂದು ಉತ್ತಮ ವೇದಿಕೆಯಾಗಲಿದೆ. ನೀತಿಗಳ ಅನುಷ್ಠಾನ ಹೂಡಿಕೆ ಸೌಲಭ್ಯ ಮತ್ತು ತಂತ್ರಜ್ಞಾನ ಅಳವಡಿಕೆ ಸೇರಿದಂತೆ ಬಜೆಟ್‌ನಲ್ಲಿ ಪ್ರಕಟಿಸಿರುವ ಹಲವಾರು ಸುಧಾರಣಾ ಕ್ರಮಗಳ ಜಾರಿ ನಿಟ್ಟಿನಲ್ಲಿ ಚರ್ಚೆಗಳು ಉತ್ತು ನೀಡಲಿವೆ. ಖಾಸಗಿ ವಲಯದ ತಜ್ಞರು, ಕೈಗಾರಿಕೋದ್ಯಮದ ಪ್ರತಿನಿಧಿಗಳು ವಿಷಯ ತಜ್ಞರು, ಮತ್ತಿತರರು ವೆಬ್‌ನಾರ್ ಗಳಲ್ಲಿ ಭಾಗವಹಿಸುವ ಮೂಲಕ ಬಜೆಟ್ ಘೋಷಣೆಗಳ ಪರಿಣಾಮಕಾರಿ ಅನುಷ್ಟಾನ ಕುರಿತಂತೆ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಲಿದ್ದಾರೆ.

***************

ಭಾರತ ಪ್ರವಾಸದಲ್ಲಿರುವ ಬೆಲ್ಜಿಯಂ ರಾಜಕುಮಾರಿ ಆಸ್ಟ್ರಿಡ್ ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ. ಆಸ್ಟ್ರಿಡ್ ಅವರು ಈ ತಿಂಗಳ ೮ ರ ವರೆಗೆ ಭಾರತದಲ್ಲಿ ಇರಲಿದ್ದಾರೆ.

ಈ ನಡುವೆ ರಾಜಕುಮಾರಿ ಆಸ್ಟ್ರಿಡ್ ಅವರು ತಮ್ಮ ದೇಶದ ರಕ್ಷಣಾ ಸಚಿವೆ ಥಿಯೊ ಫ್ರಾಂಕನ್ ಅವರೊಂದಿಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನಗನು ನವದೆಹಲಿಯಲ್ಲಿ ನಿನ್ನೆ ಭೇಟಿಮಾಡಿ ಚರ್ಚೆ ನಡೆಸಿದರು.

ಸಭೆಯಲ್ಲಿ ಭಾರತ ಮತ್ತು ಬೆಲ್ಜಿಯಂ ನಡುವೆ ಇಂಡೊಫೆಸಿಫಿಕ್ ಪ್ರದೇಶದಲ್ಲಿ, ವಿಶೇಷವಾಗಿ ಕಡಲ ಕ್ಷೇತ್ರದಲ್ಲಿ ರಕ್ಷಣಾ ಒಪ್ಪಂದಗಳ ಸಾಧ್ಯತೆಗಳ ಬಗ್ಗೆ ಚರ್ಚಿಸಲಾಯಿತು. ಇದೇ ವೇಳೆ, ಎರಡೂ ದೇಶಗಳ ನಡುವೆ ರಕ್ಷಣಾ ಕೈಗಾರಿಕಾ ಸಹಕಾರವನ್ನು ಹೆಚ್ಚಿಸುವ ಮಾರ್ಗಗಳು ಮತ್ತು ವಿಧಾನಗಳ ಕುರಿತು ಚರ್ಚಿಸಲಾಯಿತು.

ಭಾರತದ ರಕ್ಷಣಾ ಕ್ಷೇತ್ರದಲ್ಲಿ ಬೆಲ್ಜಿಯಂ ಹೂಡಿಕೆಗಳನ್ನು ರಾಜನಾಥ್ ಸಿಂಗ್ ಸ್ವಾಗತಿಸಿದರು. ಭಾರತದಲ್ಲಿ ತಮ್ಮ ವ್ಯಾಪಾರವನ್ನು ವಿಸ್ತರಿಸುವ ಮೂಲಕ ಮತ್ತು ಭಾರತೀಯ ವ್ಯಪಾರಸ್ಥರನ್ನು ತಮ್ಮ ಪೂರೈಕೆ ಸರಪಣಿಯಲ್ಲಿ ಸಂಯೋಜಿಸುವ ಮೂಲಕ

ಬೆಲ್ಜಿಯಂ ಕಂಪನಿಗಳು ಪ್ರಮುಖ ಪಾತ್ರವಹಿಸಬಹುದು ಎಂದು ಸಚಿವ ರಾಜನಾಥ್ ಸಿಂಗ್ ಸಲಹೆ ನೀಡಿದರು.

ಇದೇ ವೇಳೆ, ಸಾಂಸ್ಥಿಕ ರಕ್ಷಣಾ ಸಹಕಾರ ಕಾರ್ಯವಿಧಾನವನ್ನು ಅನ್ವೇಷಿಸಲು ಉಭಯ ದೇಶಗಳು ಪರಸ್ಪರ ಒಪ್ಪಿಕೊಂಡವು.

****************

ವಿದೇಶಾಂಗ ವ್ಯವಹಾರಗಳ ಸಚಿವ ಡಾ ಎಸ್ ಜೈಂಶರ್ ಇಂದಿನಿಂದ ಯುನೈಟೆಡ್ ಕಿಂಗ್ ಡಮ್ ಮತ್ತು ಐರ್ಲ್ಯಾಂಡ್‌ಗೆ ಪ್ರವಾಸ ಕೈಗೊಳ್ಳಲಿದ್ದಾರೆ. ಯುನೈಟೆಡ್ ಕಿಂಗ್ ಡಮ್ ಪ್ರವಾಸ ಸಂದರ್ಭದಲ್ಲಿ ಅವರು ತಮ್ಮ ಸಹವರ್ತಿ, ವಿದೇಶಾಂಗ ಕಾರ್ಯದರ್ಶಿ ಡೆವಿಡ್ ಲ್ಯಾಮಿ ಮತ್ತು ಇತರ ಹಲವು ಪ್ರಮುಖರೊಂದಿಗೆ ಮಾತುಕತೆ ನಡೆಸಲಿದ್ದಾರೆ.

ಭಾರತ ಮತ್ತು ಯುಕೆ ನಡುವಿನ ಸಮಗ್ರ ಕಾರ್ಯತಂತ್ರ ಪಾಲುದಾರಿಕೆ ರಕ್ಷಣೆ, ಭದ್ರತೆ, ವ್ಯಾಪಾರ, ಆರ್ಥಿಕತೆ, ಆರೋಗ್ಯ, ಶಿಕ್ಷಣ ಮತ್ತು ಜನರ ನಡುವಿನ ಸಂಬಂಧಗಳ ಬಲವೃದ್ಧಿ ಕುರಿತು ಉಭಯ ದೇಶಗಳು ಚರ್ಚೆ ನಡೆಸಲಿವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಮೂಲಗಳು ತಿಳಿಸಿವೆ.

ಐರ್ಲೆಂಡ್‌ಗೆ ಎರಡು ದಿನಗಳ ಪ್ರವಾಸ ಸಂದರ್ಭದಲ್ಲಿ ಡಾ.ಜೈಶಂಕರ್, ಐರಿಶ್‌ನ ವಿದೇಶಾಂಗ ಸಚಿವ ಸೈಮನ್ ಹ್ಯಾರಿಸ್ ಮತ್ತು ಇತರ ಪ್ರಮುಖರನ್ನು ಭೇಟಿ ಮಾಡಿ ಚರ್ಚಿಸಲಿದ್ದಾರೆ.

ಇದೇ ವೇಳೆ, ಜೈಂಶಕರ್ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಲಿದ್ದಾರೆ. ಪ್ರಜಾಸತ್ತಾತ್ಮಕ ಮೌಲ್ಯಗಳು, ಸಾಂಸ್ಕೃತಿಕ ಸಂಬಂದಗಳು ಮತ್ತು ಬೆಳವಣಿಗೆ ಕಾಣುತ್ತಿರುವ ಆರ್ಥಿಕ ವ್ಯವಹಾರಗಳ ಕುರಿತು ಭಾರತ ಮತ್ತು ಐರ್ಲೆಂಡ್ ದ್ವಿಪಕ್ಷೀಯ ಸಂಬಂಧಗಳ ವೃದ್ಧಿ ಕುರಿತು ಚರ್ಚೆ ನಡೆಸಲಿವೆ.

***************

ದೇಶದ ಸಂಶೋಧನೆ ಮತ್ತು ಅಭಿವೃದ್ಧಿ ವಲಯದ ಅಭಿವೃದ್ಧಿಗೆ ಕಳೆದ ಒಂದು  ದಶಕದಲ್ಲಿ ವೆಚ್ಚ ಮಾಡಿರುವ ಅನುದಾನ ದ್ವಿಗುಣಗೊಂಡಿದೆ. ಈ ವಲಯಕ್ಕೆ ೨೦೧೩-೧೪ರಲ್ಲಿ ೧ ಕೋಟಿ ೨೭ ಲಕ್ಷ ಕೋಟಿ ರೂಪಾಯಿ ಇದ್ದದ್ದು, ಇದೀಗ ೬೦ ಸಾವಿರ ಕೋಟಿ ರೂಪಾಯಿಗೂ ಅಧಿಕವಾಗಿದೆ ಎಂದು ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ.

ನವದೆಹಲಿಯಲ್ಲಿ ನಿನ್ನೆ ಏರ್ಪಡಿಸಿದ್ದ ದಿಶಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದಿಶಾ ಕಾರ್ಯಕ್ರಮ ದೇಶದ ಜ್ಞಾನ, ಆರ್ಥಿಕತೆಯ ವೃದ್ಧಿಗೆ ಸಹಕಾರಿಯಾಗಲಿದೆ ಮತ್ತು ಆತ್ಮನಿರ್ಭರ ಭಾರತ ಅಭಿಯಾನಕ್ಕೆ ಹೆಚ್ಚಿನ ಬಲ ನೀಡಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ತಂತ್ರಜ್ಞಾನ ಅನ್ವೇಷಣೆ ಮತ್ತು ವಾಣಿಜ್ಯೀಕರಣ ವಲಯದಲ್ಲಿ ಭಾರತ ಜಾಗತಿಕ ಭೂಪಟದಲ್ಲಿ ಮುಂಚೂಣಿ ಸ್ಥಾನದಲ್ಲಿ ನಿಲ್ಲಲಿದೆ ಎಂದು ಡಾ.ಸಿಂಗ್ ಹೇಳಿದ್ದಾರೆ.

ಕೃತಕಬುದ್ಧಿಮತ್ತೆ, ಜೈವಿಕ ತಂತ್ರಜ್ಞಾನ ಮತ್ತು ಕ್ವಾಂಟಮ್ ವಲಯಗಳಲ್ಲಿನ ಅನ್ವೇಷಣೆ ದೇಶದ ಭವಿಷ್ಯದ ಆರ್ಥಿಕತೆಯನ್ನು ಬದ್ಧಪಡಿಸುವಲ್ಲಿ ತನ್ನದೇ ಕೊಡುಗೆಯನ್ನು ನೀಡಲಿದೆ ಎಂದು ಸಚಿವರು ತಿಳಿಸಿದರು.

***************

ದೇಶವಾಸಿಗಳು ತಮ್ಮ ಬದುಕಿನ ಪ್ರಯಾಣದಲ್ಲಾದ ಸ್ಫೂರ್ತಿದಾಯಕ ಘಟನಾವಳಿಗಳ ಕುರಿತು ನಮೋ ಆಪ್ ಓಪನ್ ಫೋರಂನಲ್ಲಿ ಹಂಚಿಕೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ, ನಮೋ ಆಪ್‌ನಲ್ಲಿ ಜನರ ಸ್ಫೂರ್ತಿದಾಯಕ ಪ್ರಯಾಣ ಕುರಿತು ಅನುಭವಗಳನ್ನು ಹಂಚಿಕೊಂಡಿರುವ ಹಿನ್ನೆಲೆಯಲ್ಲಿ, ಇದೇ ೮ ರಂದು ನಡೆಯಲಿರುವ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ಪ್ರಧಾನಮಂತ್ರಿ ಅವರ ಡಿಜಿಟಲ್ ಸೋಶಿಯಲ್ ಮೀಡಿಯಾ ಅಕೌಂಟ್‌ಗಳ ಮೂಲಕ ಸಾಮಾಜಿಕ ಮಾಧ್ಯಮದಲ್ಲಿ ಚರ್ಚಿಸಲು ಕೆಲವು ಮಹಿಳೆಯರಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದ್ದಾರೆ.

***************

ಭಾರತ-ಪಾಕಿಸ್ತಾನದ ಗಡಿ ಪ್ರದೇಶವಾದ ಅಮೃತಸರದಲ್ಲಿ ನಿನ್ನೆ ಗಡಿ ಭದ್ರತಾ ಯೋದರು ಪಾಕಿಸ್ತಾನ ನುಸುಳುಕೋರನೊಬ್ಬನನ್ನು ಗುಂಡಿಟ್ಟು ಕೊಂದಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಈ ರೀತಿಯ ಘಟನೆ ಎರಡನೆದಾಯದ್ದಾಗಿದೆ. ಬುಧವಾರ ಪಾಕಿಸ್ತಾನದ ನುಸುಳುಕೋರನೊಬ್ಬ ಅಂತಾರಾಷ್ಟ್ರೀಯ ಗಡಿ ಪ್ರದೇಶ ಪಠಾಣ್‌ಕೋಟ್ ಮೂಲಕ ಪ್ರವೇಶಿಸಲು ಯತ್ನಿಸಿದಾಗ ಬಿಎಸ್‌ಎಫ್ ಪಡೆಗಳು ಹತ್ಯೆಗೈದಿವೆ.

***************

ಭಾರತ-ಪಾಕಿಸ್ತಾನದ ಗಡಿ ಪ್ರದೇಶವಾದ ಅಮೃತಸರದಲ್ಲಿ ನಿನ್ನೆ ಗಡಿ ಭದ್ರತಾ ಯೋದರು ಪಾಕಿಸ್ತಾನ ನುಸುಳುಕೋರನೊಬ್ಬನನ್ನು ಗುಂಡಿಟ್ಟು ಕೊಂದಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಈ ರೀತಿಯ ಘಟನೆ ಎರಡನೆದಾಯದ್ದಾಗಿದೆ. ಬುಧವಾರ ಪಾಕಿಸ್ತಾನದ ನುಸುಳುಕೋರನೊಬ್ಬ ಅಂತಾರಾಷ್ಟ್ರೀಯ ಗಡಿ ಪ್ರದೇಶ ಪಠಾಣ್‌ಕೋಟ್ ಮೂಲಕ ಪ್ರವೇಶಿಸಲು ಯತ್ನಿಸಿದಾಗ ಬಿಎಸ್‌ಎಫ್ ಪಡೆಗಳು ಹತ್ಯೆಗೈದಿವೆ.

***************

ಮಹಾರಾಷ್ಟ್ರ ವಿಧಾನಪರಿಷತ್ತಿನ ಐದು ಸ್ಥಾನಗಳಿಗೆ ನಡೆಯಲಿರುವ ಉಪಚುನಾವಣೆಗೆ ಚುನಾವಣಾ ಆಯೋಗ ವೇಳಾಪಟ್ಟಿಯನ್ನು ಪ್ರಕಟಿಸಿದೆ.

ಈ ಸ್ಥಾನಗಳನ್ನು ಪ್ರತಿನಿಧಿಸುತ್ತಿದ್ದ ಐವರು ಸದಸ್ಯರು ವಿಧಾನಸಭೆಗೆ ಆಯ್ಕೆಯಾಗಿರುವುದರಿಂದ ತೆರವಾದ ಸ್ಥಾನಗಳಿಗೆ ಚುನಾವಣೆ ನಡೆಯಲಿದೆ.

ಇದೇ ೧೦ ರಂದು ಅಧಿಸೂಚನೆ ಹೊರಬೀಳಲಿದೆ. ನಾಮಪತ್ರ ಸಲ್ಲಿಸಲು ಇದೇ ೧೭ ಕೊನೆಯ ದಿನ. ಮತದಾನ ಇದೇ ೨೭ ರಂದು ನಡೆಯಲಿದ್ದು, ಅದೇ ದಿನ ಮತ ಎಣಿಕೆ ನಡೆಯಲಿದೆ.

***************

ಕೇಂದ್ರ ಸರ್ಕಾರವು ಭಾರತೀಯ ರೈಲ್ವೆ ಹಣಕಾಸು ನಿಗಮ-ಐಆರ್‌ಎಫ್‌ಸಿ ಮತ್ತು ಭಾರತೀಯ ರೈಲ್ವೆ ಕ್ಯಾಟರಿಂಗ್ ಮತ್ತು ಪ್ರವಾಸೋದ್ಯಮ ನಿಗಮ -ಐಆರ್‌ಸಿಟಿಸಿಗೆ ನವರತ್ನ ಸ್ಥಾನಮಾನವನ್ನು ನೀಡಿದೆ.

ಐಆರ್‌ಎಫ್‌ಸಿ ರೈಲ್ವೆ ಸಚಿವಾಲಯದ ಕೇಂದ್ರ ಸಾರ್ವಜನಿಕ ವಲಯ ಉದ್ಯಮವಾಗಿದ್ದು, ವಾರ್ಷಿಕ ೨೬ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ವಹಿವಾಟು ಹೊಂದಿದೆ. ಐಆರ್‌ಸಿಟಿಸಿ ಸಹ ರೈಲ್ವೆ ಸಚಿವಾಲಯದ ಕೇಂದ್ರ ಸಾರ್ವಜನಿಕ ವಲಯದ ಉದ್ಯಮವಾಗಿದ್ದು, ವಾರ್ಷಿಕ ೪ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ವಹಿವಾಟು ಹೊಂದಿದೆ. ನವರತ್ನ ಸ್ಥಾನಮಾನಕ್ಕೆ ಮೇಲ್ದರ್ಜೆಗೇರಿಸಿದ್ದಕ್ಕಾಗಿ ರೈಲ್ವೆ ಸಚಿವೆ ಅಶ್ವಿನಿ ವೈಷ್ಣವ್, ಐಆರ್‌ಸಿಟಿಸಿ ಮತ್ತು ಐಆರ್‌ಎಫ್‌ಸಿ ಗಳನ್ನು ಅಭಿನಂದಿಸಿದ್ದಾರೆ.

***************

ರಾಜಸ್ಥಾನದ ಜೈಪುರದ ರಾಜಸ್ಥಾನ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಮೂರು ದಿನಗಳ ಏಷ್ಯಾ ಮತ್ತು ಪೆಸಿಫಿಕ್‌ನಲ್ಲಿ ೧೨ ನೇ ಪ್ರಾದೇಶಿಕ ೩ಆರ್ ಮತ್ತು ಸಮಗ್ರ ಆರ್ಥಿಕ ಕಾರ್ಯಕ್ರಮಕ್ಕೆ ನಿನ್ನೆ ಚಾಲನೆ ನೀಡಲಾಯಿತು.

ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಕಾರ್ಯಕ್ರಮ ಉದ್ಘಾಟಿಸಿದರು.

"ಏಷ್ಯಾ-ಪೆಸಿಫಿಕ್ ಪ್ರದೇಶದಲ್ಲಿ ಇಂಗಾಲ ಹೊರಸೂಸುವಿಕೆ ಪ್ರಮಾಣವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಸಮಾಜಗಳನ್ನು ಜಾಗೃತಗೊಳಿಸುವುದು" ಎಂಬ ವಿಷಯ ಕುರಿತು, ಕಾರ್ಯಕ್ರಮದಲ್ಲಿ ಚರ್ಚೆಗಳು ನಡೆಯಲಿವೆ.

ಕಾರ್ಯಕ್ರಮದಲ್ಲಿ ಭಾಗವಹಿಸುವ ದೇಶಗಳಿಗೆ, ೩ಆರ್ ಮತ್ತು ಆರ್ಥಿಕ ನೀತಿಗಳನ್ನು ಅಭಿವೃದ್ಧಿಪಡಿಸುವ ಗುರಿ ಸಾಧನೆಗೆ ಉತ್ತೇಜನ ನೀಡುವ ಉದ್ದೇಶ ಹೊಂದಿದೆ. ಸಮಗ್ರ ತ್ಯಾಜ್ಯ ನಿರ್ವಹಣಾ ಯೋಜನೆಗಳನ್ನು ಒಳಗೊಂಡಿರುವ ಒಪ್ಪಂದಗಳಿಗೆ ಇದೇ ಸಂದರ್ಭದಲ್ಲಿ ಸಹಿ ಹಾಕಲಾಗುವುದು.

ರಾಜಸ್ಥಾನದ ಮುಖ್ಯಮಂತ್ರಿ ಭಜನ್‌ಲಾಲ್ ಶರ್ಮಾ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

****************

ಐಸಿಸಿ ಚಾಂಪಿಯನ್ಸ್ ಕ್ರಿಕೆಟ್ ಟ್ರೋಫಿಯ ಮೊದಲ ಸೆಮಿ ಫೈನಲ್ ಪಂದ್ಯ ಇಂದು ದುಬೈನಲ್ಲಿ ನಡೆಯಲಿದ್ದು, ಭಾರತ-ಆಸ್ಟ್ರೇಲಿಯಾ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ನಾಳೆ ಮಧ್ಯಾಹ್ನ ೨.೩೦ಕ್ಕೆ ಆರಂಭವಾಗಲಿದೆ.

ತಮ್ಮ ಗುಂಪು ಮಟ್ಟದ ಪಂದ್ಯಗಳಲ್ಲಿ ಎಲ್ಲಾ ಮೂರು ಪಂದ್ಯಗಳಲ್ಲಿ ಗೆಲುವು ಸಾಧಿಸುವ ಮೂಲಕ ಭಾರತ ಎ ಗುಂಪಿನಲ್ಲಿ ಅಗ್ರ ಸ್ಥಾನ ಪಡೆದಿದೆ.

ನಾಳೆ, ೫ ರಂದು ಲಾಹೋರ್‌ನಲ್ಲಿ ನ್ಯೂಜಿಲೆಂಡ್ ತಂಡ, ದಕ್ಷಿಣ ಆಫ್ರಿಕಾ ವಿರುದ್ಧ ಸೆಣಸಲಿದೆ. ಫೈನಲ್ ಪಂದ್ಯ ಇದೇ ೯ ರ ಭಾನುವಾರ ಜರುಗಲಿದೆ.

********ಮುಕ್ತಾಯ********